**All India Radio: Bangalore**
**National Bulletin In Kannada**
**18.10.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.10.2025 1.10 p.m.**

**<><><><>**

ಮುಖ್ಯಾಂಶಗಳು

1. ದೇಶವು ಶೀಘ್ರವೇ ಮಾವೋವಾದಿ ಹಿಂಸಾಚಾರದಿಂದ ಸಂಪೂರ್ಣ ಮುಕ್ತ - ಪ್ರಧಾನಿ ನರೇಂದ್ರ ಮೋದಿ
2. ಲಖನೌ ಏರೋಸ್ಪೇಸ್ ಘಟಕದಲ್ಲಿಂದು ಮೊದಲ ಹಂತದ ಬ್ರಹ್ಮೋಸ್ ಕ್ಷಿಪಣಿಗಳಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಸಿರು ನಿಶಾನೆ
3. ಬಿಹಾರ ವಿಧಾನಸಭಾ ಚುನಾವಣೆ; ಇಂದು ಮೊದಲ ಹಂತದ ನಾಮಪತ್ರಗಳ ಪರಿಶೀಲನೆ
4. ಅಫ್ಘಾನಿಸ್ತಾನದ ಪಕ್ತಿಕಾ ಪ್ರಾಂತ್ಯದ ಮೇಲೆ ಪಾಕಿಸ್ತಾನ ವಾಯುದಾಳಿ; ಮೂವರು ಕ್ರಿಕೆಟ್ ಆಟಗಾರರು ಸೇರಿ ಹತ್ತು ನಾಗರಿಕರು ಸಾವು
5. ಪರ್ತ್‌ನಲ್ಲಿ ನಾಳೆಯಿಂದ ಭಾರತ - ಆಸ್ಟ್ರೇಲಿಯಾ ನಡುವೆ ಮೂರು ಪಂದ್ಯಗಳ ಏಕದಿನ ಸರಣಿ ಆರಂಭ

<><><><>

ದೇಶವು ಶೀಘ್ರದಲ್ಲೇ ಮಾವೋವಾದಿ ಹಿಂಸಾಚಾರದಿಂದ ಸಂಪೂರ್ಣ ಮುಕ್ತವಾಗಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ವಿಶ್ವ ಶೃಂಗಸಭೆಯ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾವೋವಾದಿಗಳ ಹಿಂಸಾಚಾರವನ್ನು ನಿಭಾಯಿಸುವಲ್ಲಿ ದೇಶ ಗಣನೀಯ ಪ್ರಗತಿ ಸಾಧಿಸಿದೆ ಎಂದು ಹೇಳಿದ್ದಾರೆ. ೧೧ ವರ್ಷಗಳ ಹಿಂದೆ ೧೨೫ಕ್ಕೂ ಹೆಚ್ಚು ಜಿಲ್ಲೆಗಳು ನಕ್ಸಲರ ಹಿಂಸಾಚಾರದಿಂದ ತತ್ತರಿಸಿ ಹೋಗಿದ್ದವು. ಈಗ ಅದು ೧೧ ಜಿಲ್ಲೆಗಳಿಗೆ ಇಳಿದಿದೆ. ಇವುಗಳಲ್ಲಿ ಕೇವಲ ಮೂರು ಜಿಲ್ಲೆಗಳು ನಕ್ಸಲ್ ಪೀಡಿತವಾಗಿವೆ. ದೀಪಾವಳಿಯ ಈ ಶುಭ ಸಂದರ್ಭದಲ್ಲಿ ನಕ್ಸಲರು ಅಭಿವೃದ್ಧಿಯ ಮುಖ್ಯವಾಹಿನಿಗೆ ಮರಳುತ್ತಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

**ಧ್ವನಿ : ನರೇಂದ್ರ ಮೋದಿ (೩೨ ಸೆಕೆಂಡ್‌ಗಳು)**

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಇಂದು ಲಕ್ನೋದ ಬ್ರಹ್ಮೋಸ್ ಏರೋಸ್ಪೇಸ್ ಘಟಕದಲ್ಲಿ ತಯಾರಾದ ಮೊದಲ ತಂಡದ ಬ್ರಹ್ಮೋಸ್ ಕ್ಷಿಪಣಿಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ. ಲಕ್ನೋ ಬ್ರಹ್ಮೋಸ್ ಘಟಕವು ಉತ್ತರ ಪ್ರದೇಶ ರಕ್ಷಣಾ ಕಾರಿಡಾರ್ ನಲ್ಲಿ ಕ್ಷಿಪಣಿ ವ್ಯವಸ್ಥೆಯ ತಯಾರಿಕೆಯಿಂದ ಹಿಡಿದು, ಅಂತಿಮ ಪರೀಕ್ಷೆಯವರೆಗಿನ ಸಂಪೂರ್ಣ ಪ್ರಕ್ರಿಯೆಯನ್ನು ಸ್ಥಳೀಯವಾಗಿ ನಡೆಸುತ್ತಿದೆ. ಸಮಾರಂಭದಲ್ಲಿ, ರಕ್ಷಣಾ ಸಚಿವರು ಮತ್ತು ಉತ್ತರಪ್ರದೇಶ ಮುಖ್ಯಮಂತ್ರಿ ಬೂಸ್ಟರ್ ಕಟ್ಟಡವನ್ನು ಉದ್ಘಾಟಿಸಲಿದ್ದಾರೆ. ಬೂಸ್ಟರ್ ಡಾಕಿಂಗ್ ಪ್ರಕ್ರಿಯೆಯ ಪ್ರದರ್ಶನವನ್ನು ವೀಕ್ಷಿಸಲಿದ್ದಾರೆ. ಉತ್ತರ ಪ್ರದೇಶ ರಕ್ಷಣಾ ಕೈಗಾರಿಕಾ ಕಾರಿಡಾರ್‌ನ ಮಹತ್ವದ ಮೈಲಿಗಲ್ಲಾಗಿರುವ ಬ್ರಹ್ಮೋಸ್ ಕ್ಷಿಪಣಿಗಳು ರಕ್ಷಣಾ ಉತ್ಪನ್ನಗಳಲ್ಲಿ ಸ್ವಾವಲಂಬನೆ ಸಾಧಿಸುವ ದೇಶದ ಸಂಕಲ್ಪಕ್ಕೆ ನವಚೈತ್ಯನ್ಯ ತುಂಬಲಿದೆ.

<><><><>

ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದ ನಾಮಪತ್ರಗಳ ಪರಿಶೀಲನೆ ಇಂದು ನಡೆಯಲಿದೆ. ಮೊದಲ ಹಂತದಲ್ಲಿ, ನವೆಂಬರ್ ೬ ರಂದು ೧೮ ಜಿಲ್ಲೆಗಳ ೧೨೧ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಅಭ್ಯರ್ಥಿಗಳು ಅಕ್ಟೋಬರ್ ೨೦ರೊಳಗೆ ತಮ್ಮ ನಾಮಪತ್ರಗಳನ್ನು ಹಿಂಪಡೆಯಬಹುದು. ಮೊದಲ ಹಂತದ ನಾಮಪತ್ರಗಳ ಕೊನೆಯ ದಿನದಂದು, ನಾಲ್ವರು ಸಚಿವರು ಸೇರಿದಂತೆ ಹಲವಾರು ಪ್ರಮುಖ ಅಭ್ಯರ್ಥಿಗಳು ತಮ್ಮ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಮೊದಲ ಹಂತಕ್ಕೆ ಒಟ್ಟು ೧ ಸಾವಿರದ ೬೯೮ ನಾಮಪತ್ರಗಳು ಸಲ್ಲಿಕೆಯಾಗಿವೆ. ಎರಡನೇ ಹಂತಕ್ಕೆ ಇಲ್ಲಿಯವರೆಗೆ ೨೯೦ ನಾಮಪತ್ರಗಳು ಸಲ್ಲಿಕೆಯಾಗಿವೆ. ನವೆಂಬರ್ ೧೧ ರಂದು ಎರಡನೇ ಹಂತದಲ್ಲಿ ೨೦ ಜಿಲ್ಲೆಗಳ ೧೨೨ ವಿಧಾನಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ.

<><><><>

೨೦೨೨ರಲ್ಲಿ ಶ್ರೀಲಂಕಾ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿದ್ದ ಸಂದರ್ಭದಲ್ಲಿ ಬೆಂಬಲ ನೀಡಿದ್ದಕ್ಕಾಗಿ ಶ್ರೀಲಂಕಾ ಪ್ರಧಾನಿ ಹರಿಣಿ ಅಮರ ಸೂರ್ಯ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. ನವದೆಹಲಿಯಲ್ಲಿ ನಡೆದ ವಿಶ್ವ ಶೃಂಗಸಭೆಯಲ್ಲಿ ಮಾತನಾಡಿದ ಅಮರಸೂರ್ಯ, ವಿವಿಧ ವಲಯಗಳಲ್ಲಿ ಭಾರತ - ಶ್ರೀಲಂಕಾ ಸಂಬಂಧಗಳನ್ನು ಬಲಪಡಿಸುವ ಮಹತ್ವವನ್ನು ಒತ್ತಿ ಹೇಳಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ೩೬ ವರ್ಷಗಳಷ್ಟು ಹಳೆಯದಾದ ಮುಕ್ತ ವ್ಯಾಪಾರ

ಒಪ್ಪಂದ ನವೀಕರಿಸುವಲ್ಲಿ ಹಾಗೂ ಪ್ರಾದೇಶಿಕ ಸಹಕಾರ ಹೆಚ್ಚಿಸುವಲ್ಲಿ ಉಭಯ ರಾಷ್ಟ್ರಗಳು ಚರ್ಚೆ ನಡೆಸಿವೆ ಎಂದು ತಿಳಿಸಿದ್ದಾರೆ.

<><><>

ದೇಶಾದ್ಯಂತ ಇಂದು ಧನ್ ತೆರಾಸ್ ಹಬ್ಬವನ್ನು ಆಚರಿಸಲಾಗುತ್ತಿದೆ. ಈ ಶುಭ ದಿನದಂದು ಜನರು ಧನ್ವಂತರಿ, ಕುಬೇರ ಮತ್ತು ಲಕ್ಷ್ಮಿ ದೇವಿಯನ್ನು ಪೂಜಿಸುತ್ತಾರೆ. ಹಿಂದೂ ಕ್ಯಾಲೆಂಡರ್ ಪ್ರಕಾರ ಆಶ್ವಯುಜ ಮಾಸದ ಕೃಷ್ಣ ಪಕ್ಷದ ಹದಿಮೂರನೇ ದಿನದಂದು ಈ ಹಬ್ಬವನ್ನು ಆಚರಿಸಲಾಗುತ್ತದೆ. ಜನರು  ಈ ದಿನದಂದು ಹೊಸ ವಸ್ತುಗಳನ್ನು, ಚಿನ್ನ ಅಥವಾ ಬೆಳ್ಳಿ ಇಲ್ಲವೆ ಹೊಸ ಪಾತ್ರೆಗಳನ್ನು ಖರೀದಿ ಮಾಡುವುದು ವಿಶೇಷವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಧನ್ ತೆರಾಸ್ ಹಬ್ಬದ ಹಿನ್ನೆಲೆಯಲ್ಲಿ  ಜನತೆಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ಹಬ್ಬವು ಎಲ್ಲರಿಗೂ ಸಂತೋಷ, ಸಮೃದ್ಧಿ ಮತ್ತು ಉತ್ತಮ ಆರೋಗ್ಯವನ್ನು ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ಭಗವಾನ್ ಧನ್ವಂತರಿ ಎಲ್ಲಾ ಜನತೆಗೆ ಆಶೀರ್ವಾದಗಳನ್ನು ದಯಪಾಲಿಸಲಿ ಎಂದು ಆಶಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ, ಈ ಹಬ್ಬವು ಪ್ರತಿ ಯೊಬ್ಬರ ಜೀವನದಲ್ಲಿ ಸಂತೋಷ, ಸಮೃದ್ಧಿ ಮತ್ತು ಅದೃಷ್ಟ ತರಲಿ ಎಂದು ಹೇಳಿದ್ದಾರೆ.  ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ, ಲಕ್ಷ್ಮಿ ಹಾಗೂ ಧನ್ವಂತರಿ ದೇವರ ಆಶೀರ್ವಾದವು ಎಲ್ಲರಿಗೂ ಸಂಪತ್ತು, ಸಮೃದ್ಧಿ ಮತ್ತು ಸಂತೋಷವನ್ನು ತರಲಿ ಎಂದು ಕೋರಿದ್ದಾರೆ.

<><><>

ಇದೇ ೨೨ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಶಬರಿಮಲೆ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಲಿದ್ದಾರೆ. ಕೇರಳದ ಶಬರಿಮಲೆ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸುವ ದೇಶದ ಅತ್ಯುನ್ನತ ಹುದ್ದೆಯಲ್ಲಿರುವ ಎರಡನೇ ವ್ಯಕ್ತಿಯಾಗಲಿದ್ದಾರೆ ಎಂದು ತಿರುವಾಂಕೂರು ದೇವಸ್ವಂ ಮಂಡಳಿ ಅಧ್ಯಕ್ಷ ಪಿ.ಎಸ್. ಪ್ರಶಾಂತ್ ತಿಳಿಸಿದ್ದಾರೆ. ರಾಷ್ಟ್ರಪತಿಗಳು ಇದೇ ೨೧ರಂದು ತಿರುವನಂತಪುರಂಗೆ ಆಗಮಿಸಲಿದ್ದು, ಮರು ದಿನ ಹೆಲಿಕಾಪ್ಟರ್‌ನಲ್ಲಿ ನಿಲಕ್ಕಲ್‌ಗೆ ತೆರಳಲಿದ್ದಾರೆ. ಬಳಿಕ ಅವರು ರಸ್ತೆಯ ಮೂಲಕ ಪಂಪೆಗೆ ತೆರಳಲಿದ್ದಾರೆ.  ಪಂಪಾದ ಗಣಪತಿ ದೇವಸ್ಥಾನದಲ್ಲಿ ಅಯ್ಯಪ್ಪ ಭಕ್ತರು ಪಾಲಿಸುವ ಆಚರಣೆಗಳನ್ನು ಪೂರ್ಣಗೊಳಿಸಿ, ನಂತರ ಅವರು ಅಯ್ಯಪ್ಪನ ದರ್ಶನ ಪಡೆಯಲಿದ್ದಾರೆ.

<><><>

ಪಾಕಿಸ್ತಾನವು ಅಫ್ಘಾನಿಸ್ತಾನದ ಪಕ್ತಿಕಾದ ಗಡಿ ಪ್ರಾಂತ್ಯದ ಮೇಲೆ ಕಳೆದ ರಾತ್ರಿ ವಾಯುದಾಳಿ ನಡೆಸಿದ್ದು, ಮೂವರು ಕ್ರಿಕೆಟ್ ಆಟಗಾರರು ಸೇರಿದಂತೆ ಹತ್ತು ನಾಗರಿಕರು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಹಲವಾರು ಮಂದಿ ಗಾಯಗೊಂಡಿದ್ದಾರೆ. ಈ ಮೂಲಕ ಗಡಿಯಲ್ಲಿ ಪಾಕಿಸ್ತಾನ ೪೮ ಗಂಟೆಗಳ ಕದನ ವಿರಾಮ ಉಲ್ಲಂಘಿಸಿದೆ. ಹಿರಿಯ ತಾಲಿಬಾನ್ ಅಧಿಕಾರಿಯೊಬ್ಬರು ಪ್ರತಿಕ್ರಿಯಿಸಿ, ಪಾಕಿಸ್ತಾನವು ಕದನ ವಿರಾಮವನ್ನು ಉಲ್ಲಂಘಿಸಿ ಪಕ್ತಿಕಾ ಪ್ರಾಂತ್ಯದ ಮೂರು ಸ್ಥಳಗಳ ಮೇಲೆ ಬಾಂಬ್ ದಾಳಿ ನಡೆಸಿದೆ ಎಂದು ತಿಳಿಸಿದ್ದಾರೆ. ಕ್ರಿಕೆಟ್ ಆಟಗಾರರು ಸಾವನ್ನಪ್ಪಿರುವ ಹಿನ್ನೆಲೆಯಲ್ಲಿ ಮುಂದಿನ ತಿಂಗಳು ನಡೆಯಲಿರುವ ಪಾಕಿಸ್ತಾನ - ಶ್ರೀಲಂಕಾದೊಂದಿಗೆ ನಡೆಯಲಿರುವ ಮೂರು ರಾಷ್ಟ್ರಗಳ ತ್ರಿಕೋನ ಕ್ರಿಕೆಟ್ ಸರಣಿಯಿಂದ ಅಫ್ಘಾನಿಸ್ತಾನ ಹಿಂದೆ ಸರಿದಿದೆ.

<><><>

ತೈವಾನ್ ತನ್ನ ಪ್ರಾದೇಶಿಕ ಸಾಗರ ವಲಯದಲ್ಲಿ ೨೭ ಚೀನಾ ಮಿಲಿಟರಿ ವಿಮಾನಗಳು ಮತ್ತು ೮ ನೌಕಾ ಹಡಗುಗಳು ಕಾರ್ಯನಿರ್ವಹಿಸುತ್ತಿರುವುದನ್ನು ಪತ್ತೆಹಚ್ಚಿದೆ. ತೈವಾನ್ ರಾಷ್ಟ್ರೀಯ ರಕ್ಷಣಾ ಸಚಿವಾಲಯದ ಪ್ರಕಾರ ೨೭ ವಿಮಾನಗಳಲ್ಲಿ ೧೯ ವಿಮಾನಗಳು ಗಡಿರೇಖೆಯನ್ನು ದಾಟಿ ತೈವಾನ್‌ನ ಉತ್ತರ, ಮಧ್ಯ ಮತ್ತು ನೈಋತ್ಯ ವಾಯು ರಕ್ಷಣಾ ವಲಯವನ್ನು ಪ್ರವೇಶಿಸಿವೆ. ಇದೇ ವೇಳೆ ತೈವಾನ್, ಚೀನಾದ ಪರಮಾಣು ಶಸ್ತ್ರಾಗಾರದ ಬಗ್ಗೆಯೂ ಕಳವಳ ವ್ಯಕ್ತಪಡಿಸಿದೆ.

<><><>

ಪಂಜಾಬ್‌ನ ಅಮೃತಸರ ಹಾಗೂ ಸಹರ್ಸಾ ನಡುವೆ ಚಲಿಸುತ್ತಿದ್ದ ಗರೀಬ್ ರಥ ರೈಲಿನ ಬೋಗಿಯಲ್ಲಿ ಇಂದು ಬೆಳಗ್ಗೆ ಬೆಂಕಿ ಕಾಣಿಸಿಕೊಂಡಿದೆ. ರೈಲು ಲೂಧಿಯಾನದಿಂದ ಹೊರಟ ಸ್ವಲ್ಪ ಸಮಯದಲ್ಲೇ ಸಿರ್ಹಿಂದ್ ರೈಲ್ವೆ ನಿಲ್ದಾಣದ ಬಳಿ ಬೆಂಕಿ ಕಾಣಿಸಿಕೊಂಡಿದೆ. ರೈಲ್ವೆ ಸಿಬ್ಬಂದಿ, ರೈಲ್ವೆ ಪೊಲೀಸ್, ರೈಲ್ವೆ ರಕ್ಷಣಾ ಪಡೆ, ಸ್ಥಳೀಯ ಪೊಲೀಸ್ ತಂಡ ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದೆ. ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ ಎಂದು ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

<><><>

ಭಾರತ - ಆಸ್ಟ್ರೇಲಿಯಾ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿ ಆಸ್ಟ್ರೇಲಿಯಾದ ಪರ್ತ್‌ನಲ್ಲಿ ನಾಳೆಯಿಂದ ಆರಂಭವಾಗಲಿದೆ. ಈ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ ಕಣಕ್ಕಿಳಿಯಲಿದ್ದಾರೆ. ಈಗಾಗಲೇ ಉಭಯ ಆಟಗಾರರು ಟಿ-೨೦ ಪಂದ್ಯಗಳಿಂದ ನಿವೃತ್ತಿ

ಹೊಂದಿದ್ದಾರೆ. ಈ ಸರಣಿ ಮೂಲಕ ಶುಭ್‌ಮನ್ ಗಿಲ್ ಏಕದಿನ ಪಂದ್ಯವನ್ನು ಮುನ್ನಡೆಸಲಿದ್ದಾರೆ.

ಈ ಸರಣಿಯಲ್ಲಿ ಮೂರು ಏಕದಿನ ಪಂದ್ಯಗಳು ಹಾಗೂ ೫ ಟಿ-೨೦ ಪಂದ್ಯಗಳು ನಡೆಯಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>